**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| 01. | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 533 |
| 02. | ಮಾನ್ಯ ವಿಧಾನ ಪರಿಷತ್ತು ಸದಸ್ಯರ ಹೆಸರು | : ಡಾ॥ ಚಂದ್ರಶೇಖರ್ ಬ. ಪಾಟೀಲ್ (ಪದವೀಧರರ ಕ್ಷೇತ್ರ)) |
| 03. | ಉತ್ತರಿಸುವ ದಿನಾಂಕ | : 20/2/2023 |
| 04. | ಉತ್ತರಿಸುವ ಸಚಿವರು. | : ಗೃಹ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ 3 ವರ್ಷಗಳಲ್ಲಿ ಸೈಬರ್ ಕ್ರೈಂ ಅಪರಾಧಗಳು ದಿನನಿತ್ಯ ಹೆಚ್ಚಾಗುತ್ತಿದ್ದು, ಸರ್ಕಾರ ಇಲ್ಲಿಯವರೆಗೆ ಅಪರಾಧವೆಸಗಿದವರ ಮೇಲೆ ಕೈಗೊಂಡ ಕ್ರಮವೇನು; | ರಾಜ್ಯದಲ್ಲಿ ಸೈಬರ್ ಅಪರಾಧಗಳು ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br>ಸೈಬರ್ ಅಪರಾಧಗಳಲ್ಲಿ ಭಾಗಿಯಾಗಿರುವವರ ವಿರುದ್ಧ ಅನ್ವಯವಾಗುವ ಭಾರತ ದಂಡ ಸಂಹಿತೆ (ಐಪಿಸಿ) ಹಾಗೂ ಇನ್‌ಫಾರ್‌ಮೇಷನ್ ಟೆಕ್ನಾಲೋಜಿ ಆಕ್ಟ್ (ಐಟಿ ಕಾಯ್ದೆ)ಯಂತಹ ವಿವಿಧ ಕಾನೂನುಗಳಡಿಯಲ್ಲಿ ಪ್ರಕರಣವನ್ನು ದಾಖಲಿಸಿಕೊಂಡು, ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ.<br>ಕಳೆದ ಮೂರು ವರ್ಷಗಳಲ್ಲಿ ಸೈಬರ್ ಅಪರಾಧಗಳಲ್ಲಿ ಭಾಗಿಯಾಗಿರುವ ಆರೋಪಿಗಳ ಮತ್ತು ಆರೋಪಿಗಳ ಪೈಕಿ ಬಂಧಿಸಿರುವವರ ಸಂಖ್ಯೆ ಈ ಕೆಳಕಂಡಂತಿದೆ.<br><br>**ವರ್ಷ** \| **ಸೈಬರ್ ಅಪರಾಧಗಳಲ್ಲಿ ಭಾಗಿಯಾಗಿರುವ ಆರೋಪಿಗಳ ಸಂಖ್ಯೆ** \| **ಬಂಧಿಸಿರುವ ಆರೋಪಿಗಳ ಸಂಖ್ಯೆ.**<br>2020 \| 4751 \| 584<br>2021 \| 3501 \| 525<br>2022 \| 2701 \| 371<br>2023 (31 ಜನವರಿ) \| 172 \| 23 |
| ಆ) | ಇದರಿಂದ ಹಣ ಮತ್ತು ಅಶ್ಲೀಲ ವಿಷಯಗಳು ಜಾಲತಾಣಗಳಲ್ಲಿ ಹರಡುತ್ತಿರುವುದರಿಂದ ಜನರು ವಂಚನೆಗೊಳಗಾಗುತ್ತಿದ್ದು, ಸರ್ಕಾರದಲ್ಲಿ ಇಲ್ಲಿಯವರೆಗೆ ಎಷ್ಟು ಪ್ರಕರಣಗಳು ದಾಖಲಾಗಿವೆ; | ಕಳೆದ ಮೂರು ವರ್ಷಗಳಲ್ಲಿ ಹಣ, ಅಶ್ಲೀಲ ಮತ್ತಿತರ ವಿಷಯಗಳ ಜಾಲತಾಣಗಳ ಕುರಿತಂತೆ ಸೈಬರ್ ಅಪರಾಧಗಳ ಅಡಿಯಲ್ಲಿ ರಾಜ್ಯದ ಪೊಲೀಸ್ ಠಾಣೆಗಳಲ್ಲಿ ದಾಖಲಿಸಿರುವ ಪ್ರಕರಣಗಳ ಸಂಖ್ಯೆ ಈ ಕೆಳಕಂಡಂತಿದೆ.<br><br>**ವರ್ಷ** \| **ದಾಖಲಿಸಿರುವ ಸೈಬರ್ ಪ್ರಕರಣಗಳ ಸಂಖ್ಯೆ**<br>2020 \| 10738<br>2021 \| 8132<br>2022 \| 12551<br>2023 (31 ಜನವರಿ) \| 1325 |

| | | |
|---|---|---|
| ಇ) | ಅಪರಾಧಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮವೇನು? | **ಸೈಬರ್ ಅಪರಾಧಗಳನ್ನು ತಡೆಗಟ್ಟಲು ಸರ್ಕಾರವು ಕೈಗೊಂಡಿರುವ ಕ್ರಮಗಳ ವಿವರಗಳು.**<br>➢ ಸರ್ಕಾರವು ಸೈಬರ್ ವಂಚನೆಗೊಳಗಾದ ಶೋಷಿತರ ಅನುಕೂಲಕ್ಕಾಗಿ ಪ್ರತಿ ಜಿಲ್ಲೆಯಲ್ಲಿ ಹಾಗೂ ನಗರ ವ್ಯಾಪ್ತಿಯಲ್ಲಿ ಒಂದೊಂದು ವಿಶೇಷ ಸೈಬರ್ ಪೊಲೀಸ್ ಠಾಣೆಗಳನ್ನು(ಸಿ.ಇ.ಎನ್ ಪೊಲೀಸ್ ಠಾಣೆ) ತೆರೆಯಲಾಗಿರುತ್ತದೆ.<br>➢ ಅಲ್ಲದೆ ಪ್ರತಿ ಠಾಣೆಗಳಲ್ಲಿಯೂ ಸಹ ದೂರನ್ನು ಸ್ವೀಕರಿಸುವಂತೆ ಸೂಕ್ತ ಕ್ರಮ ಕೈಗೊಳ್ಳಲಾಗಿದೆ.<br>➢ ಸೈಬರ್ ಕ್ರೈಂ ಅಪರಾಧಗಳಿಗೆ ಸಂಬಂಧಿಸಿದಂತೆ ಸರ್ಕಾರವು ಸಾರ್ವಜನಿಕರಲ್ಲಿ ಅರಿವು ಮೂಡಿಸುವಲ್ಲಿ ಬಹಳಷ್ಟು ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಎಲ್ಲಾ ವರ್ಗದ ಜನಗಳಿಗೂ ಸಾಮಾಜಿಕ ಜಾಲತಾಣ ಮತ್ತು ಎಲ್ಲಾ ಮಾಧ್ಯಮಗಳಿಂದಲೂ ಸಹ ಸಾಮಾನ್ಯ ಜನರಿಗೆ ಅನುಕೂಲವಾಗುವ ರೀತಿಯಲ್ಲಿ ಅರಿವು ಮೂಡಿಸಲಾಗುತ್ತಿರುತ್ತದೆ.<br>➢ ಸೈಬರ್ ಅಪರಾಧಗಳನ್ನು ತಡೆಗಟ್ಟುವ ಸಲುವಾಗಿ ಸಿಐಡಿ ಕಛೇರಿಯಲ್ಲಿ "Centre for Cyber Crime Investigation & Digital Forensic Training & Research" ಘಟಕವನ್ನು ಪ್ರಾರಂಭಿಸಲಾಗಿದ್ದು, Data Security Council of India ರವರ ಸಹಯೋಗದೊಂದಿಗೆ ವಿಶೇಷ ಸೈಬರ್ ಪೊಲೀಸ್ ಠಾಣೆಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಗೆ ವಿಶೇಷ ತರಬೇತಿಯನ್ನು ನೀಡಲಾಗುತ್ತಿದೆ.<br>➢ ಸಿಐಡಿ ಕಛೇರಿಯಲ್ಲಿ ಸಿ.ಎಫ್.ಯು ವಿಭಾಗವು ಹಿರಿಯ ಅಧಿಕಾರಿಗಳ ಉಸ್ತುವಾರಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಸಿ.ಎಫ್.ಯು ವಿಭಾಗದಲ್ಲಿ ಆಧುನಿಕ ತಂತ್ರಜ್ಞಾನ ಬಳಸಿಕೊಂಡು ಪ್ರಕರಣಗಳನ್ನು ಭೇದಿಸಲಾಗುತ್ತಿದೆ.<br>➢ ಬ್ಯಾಂಕಿಂಗ್ ಅಪರಾಧಗಳಿಗೆ ಸಂಬಂಧಿಸಿದಂತೆ ಆರ್.ಬಿ.ಐ ಅಧಿಕಾರಿಗಳು, ಪೊಲೀಸ್ ಅಧಿಕಾರಿಗಳು ಹಾಗೂ ಬ್ಯಾಂಕ್ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಬ್ಯಾಂಕಿಂಗ್ ಹಾಗೂ ಇತರೆ ಸೈಬರ್ ಅಪರಾಧಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಹಲವು ಪರಿಣಾಮಕಾರಿ ಸುರಕ್ಷತಾ ಕ್ರಮಗಳನ್ನು ಅನುಸರಿಸಿ ಸಾರ್ವಜನಿಕರ ಹಿತ ಕಾಪಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.<br>➢ ರಾಜ್ಯದ ಎಲ್ಲಾ ಟೆಲಿಕಾಮ್ ಸೇವಾದಾರರನ್ನು (TSP) ಸಂಪರ್ಕಿಸಿ ಅವರ ಗ್ರಾಹಕರಿಗೆ ಬ್ಯಾಂಕಿಂಗ್ ಡಿಟೇಲ್ಸ್ ಮತ್ತು ಪಾಸ್‌ವರ್ಡನ್ನು ಯಾರಿಗೂ ನೀಡಬಾರದೆಂದು ಸಮೂಹ ಸಂದೇಶಗಳನ್ನು (Group Messages) ರವಾನಿಸುವ ಮೂಲಕ ಸಾರ್ವಜನಿಕರಿಗೆ / ಗ್ರಾಹಕರಿಗೆ ಜಾಗೃತಿ ಮೂಡಿಸಲಾಗಿರುತ್ತದೆ.<br>➢ ಸಿಐಡಿಯ ನ್ಯಾಸ್‌ಕಾಂ ಲ್ಯಾಬ್‌ನಲ್ಲಿ ಕಳೆದ ಕೆಲವು ವರ್ಷಗಳಿಂದ ಮಿಲಟರಿ, ಬ್ಯಾಂಕಿಂಗ್ ಸೆಕ್ಟರ್, ಸರ್ಕಾರಿ ಸಂಸ್ಥೆಗಳು, ನ್ಯಾಯಾಂಗದ ಅಭಿಯೋಜಕರಿಗೆ, ಪೊಲೀಸ್ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಯವರುಗಳಿಗೆ ಸೈಬರ್‌ಕ್ರೈಂ |

| | | |
|---|---|---|
| | | ಅಪರಾಧಗಳನ್ನು ತಡೆಗಟ್ಟುವ ಸಿಬ್ಬಂದಿಯವರುಗಳಿಗೆ ಸೈಬರ್‌ಕ್ರೈಂ ಅಪರಾಧಗಳನ್ನು ತಡೆಗಟ್ಟುವ ಬಗ್ಗೆ ಮತ್ತು ಪತ್ತೆ ಮಾಡುವ ಬಗ್ಗೆ ತರಬೇತಿಯನ್ನು ನೀಡಲಾಗಿರುತ್ತದೆ.<br>➢ ಸೈಬರ್ ಕ್ರೈಂ ಅಪರಾಧದ ಬಗ್ಗೆ ಸಾರ್ವಜನಿಕರಲ್ಲಿ ತಿಳುವಳಿಕೆ ಮೂಡಿಸುವ ಸಲುವಾಗಿ ಮುದ್ರಣ ಮಾಧ್ಯಮಗಳ (Print Media) ಮೂಲಕ ವರದಿಗಳನ್ನು ಪ್ರಕಟಿಸುವುದರ ಮೂಲಕ ಜಾಗೃತಿ ಮೂಡಿಸಲಾಗುತ್ತಿದೆ.<br>➢ ಸಾಮಾಜಿಕ ಜಾಲತಾಣಗಳಾದ ಫೇಸ್‌ಬುಕ್, ವಾಟ್ಸ್‌ಆಪ್ ಹಾಗೂ ಟ್ವೀಟರ್‌ಗಳ ಮೂಲಕ ಸೈಬರ್ ಜಾಗೃತಿಯ ಸಂದೇಶಗಳನ್ನು ರವಾನಿಸುವ ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ. ಸೈಬರ್ ಜಾಗೃತಿ ಸಪ್ತಾಹವನ್ನು ಆಚರಿಸುವ ಮೂಲಕ ಕರಪತ್ರಗಳನ್ನು ಮುದ್ರಿಸಿ ಶಾಲಾ ಕಾಲೇಜ್‌ಗಳಿಗೆ ಭೇಟಿ ನೀಡಿ ವಿದ್ಯಾರ್ಥಿಗಳಿಗೆ ಸೈಬರ್ ಅಪರಾಧಗಳನ್ನು ತಡೆಗಟ್ಟುವ ಬಗ್ಗೆ ಅರಿವನ್ನು ಮೂಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.<br>➢ ಕೇಂದ್ರ ಸರ್ಕಾರದ ಗೃಹ ಮಂತ್ರಾಲಯವು ಆರ್ಥಿಕ ಸ್ವರೂಪದ ಸೈಬರ್ ಅಪರಾಧವನ್ನು ತಡೆಗಟ್ಟಲು ಉಚಿತ ಸಹಾಯವಾಣಿ (ಟಾಲ್ ಫ್ರೀ) ಸಂ: 1930 ಸೇವೆಯನ್ನು ಪ್ರಾರಂಭಿಸಿರುತ್ತದೆ.<br>➢ ಕರ್ನಾಟಕ ರಾಜ್ಯ ಸರ್ಕಾರವು ಕೇಂದ್ರ ಸರ್ಕಾರದ ಗೃಹ ಮಂತ್ರಾಲಯದ ಒಡಂಬಡಿಕೆಯೊಂದಿಗೆ ಉಚಿತ ಸಹಾಯವಾಣಿ ಸಂಖ್ಯೆ 112 ಗೆ ಕರೆ ಮಾಡಿ ದೂರು ದಾಖಲಿಸುವ ಹಾಗೂ ವಂಚನೆಗೆ ಬಳಕೆಯಾಗುವ ಬ್ಯಾಂಕ್ ಖಾತೆಗಳನ್ನು ತನಿಖೆಯ ಸಲುವಾಗಿ ತಾತ್ಕಾಲಿಕವಾಗಿ ಸ್ಥಗಿತಗೊಳಿಸುವ ಯೋಜನೆಯನ್ನು ಜಾರಿಗೆ ತರಲಾಗಿದೆ. |

**ಸಂಖ್ಯೆ: ಹೆಚ್‌ಡಿ 07 ಹಿಸಿಕ್ಯೂ 2023**

(ಆರಗ ಜ್ಞಾನೇಂದ್ರ)
**ಗೃಹ ಸಚಿವರು**